# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** ದಿನಾಂಕ: 17.08.2019

## ಪೂಜ್ಯ ಮಹಾಪೌರರು ರವರಿಂದ "ಜೀರೋ ವೇಸ್ಟ್ ಕ್ಯಾಂಪಸ್" ಯೋಜನೆಗೆ ಚಾಲನೆ:



ಬಿಬಿಎಂಪಿ ಕೇಂದ್ರ ಕಚೇರಿ ಆವರಣವನ್ನು "ಜೀರೋ ವೇಸ್ಟ್ ಕ್ಯಾಂಪಸ್" ಮಾಡುವ ಯೋಜನೆಗೆ ಪೂಜ್ಯ ಮಹಾಪೌರರು ಶನಿವಾರ ಚಾಲನೆ ನೀಡಿದರು. ಈ ವೇಳೆ ಮಾನ್ಯ ಉಪಮಹಾಪೌರರು, ಮಾನ್ಯ ಆಯುಕ್ತರು, ಮಾನ್ಯ ಆಡಳಿತ ಮತ್ತು ಜೆಡಿಎಸ್ ನಾಯಕರುಗಳು, ಅಪರು ಆಯುಕ್ತರು(ಘನತ್ಯಾಜ್ಯ) ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಬಿಎಂಪಿ ಕೇಂದ್ರ ಕಚೇರಿ ಆವರಣದಲ್ಲಿ ಉತ್ಪತ್ತಿ ಆಗುವ ಕಸವನ್ನು ಆವರಣದಲ್ಲೇ ಸಂಸ್ಕರಿಸಿ "ಜೀರೋ ವೇಸ್ಟ್ ಕ್ಯಾಂಪಸ್" ಮಾಡಿ ಎಲ್ಲರಿಗೂ ಮಾದರಿಯಾಗಬೇಕು ಎಂದು ಮಹಾಪೌರರು ತಿಳಿಸಿದರು.

ಚಾಲನೆ ನೀಡಿದ ಬಳಿಕ ಮಾತನಾಡಿದ ಮಹಾಪೌರರು, ನಮ್ಮ ಕಸ ನಮ್ಮ ಜವಾಬ್ದಾರಿ ಎಂಬ ಘೋಷಣೆಯೊಂದಿಗೆ ಇನ್ನುಮುಂದೆ ಪಾಲಿಕೆ ಕೇಂದ್ರ ಕಚೇರಿ ಆವರಣದಲ್ಲಿ ಉತ್ಪತ್ತಿ ಆಗುವ ಹಸಿ ಕಸವನ್ನು ಆವರಣದಲ್ಲೇ ಸಂಸ್ಕರಣೆ ಮಾಡಲಾಗುವುದು. ಬಿಬಿಎಂಪಿ ಕೇಂದ್ರ ಕಚೇರಿ, ಕೌನ್ಸಿಲ್ ಕಟ್ಟಡ ಸೇರಿ ನಾಲ್ಕು ಕಟ್ಟಡಗಳು, ಉದ್ಯಾನ, ಕ್ಯಾಂಟೀನ್ ಹಾಗೂ ರಸ್ತೆಯಿಂದ

ನಿತ್ಯ 50 ಕೆ.ಜಿ ಹಸಿ ತ್ಯಾಜ್ಯ ಉತ್ಪತ್ತಿಯಾಗುತ್ತಿದ್ದು, ಅದನ್ನು ಸಂಸ್ಕರಿಸಿ ಗೊಬ್ಬರವನ್ನಾಗಿ ಪರಿವರ್ತಿಸಲು 70 ಕೆ.ಜಿ ಸಾಮರ್ಥ್ಯದ ಎರಡು ಕಾಂಪೋಸ್ಟರ್ ಗಳನ್ನು ಅಳವಡಿಸಲಾಗಿದೆ ಎಂದು ತಿಳಿಸಿದರು.

ದೇವಸ್ಥಾನದಲ್ಲಿ ಸಂಗ್ರಹವಾಗುವ ಹೂವನ್ನು ಅಲ್ಲೇ ಸಂಸ್ಕರಿಸಲು ಒಂದು ಕಾಂಪೋಸ್ಟರ್ ಅನ್ನು ಅಳವಡಿಸಲಾಗಿದೆ. ಮರದ ಎಲೆ ಸಂಸ್ಕರಿಸಲು ಎರಡು ಕಾಂಪೋಸ್ಟರ್ ಗಳನ್ನು ಅಳವಡಿಸಲಾಗಿದೆ. ಇನ್ನು ಕಚೇರಿ ಆವರಣದಲ್ಲಿ ಸಂಗ್ರಹವಾಗುವ ಒಣಕಸವನ್ನು ಚಿಂದಿ ಆಯುವವರು ವಾರಕ್ಕೊಮ್ಮೆ ಒಣ ಕಸ ಸಂಸ್ಕರಣಾ ಘಟಕಗಳಿಗೆ ಕೊಂಡೊಯ್ಯಲ್ಲಿದ್ದಾರೆ ಎಂದರು.

ಪಾಲಿಕೆ ಆವರಣದಲ್ಲಿ 134 ವಿಭಾಗೀಯ ಕಚೇರಿಗಳಿದ್ದು, ಎಲ್ಲಾ ಕಚೇರಿಗಳಿಗೂ ಹಸಿ ತ್ಯಾಜ್ಯ ಸಂಗ್ರಹಕ್ಕೆ ಹಸಿರು ಬಣ್ಣದ ಡಬ್ಬಿ, ಒಣ ಕಸ ಸಂಗ್ರಹಕ್ಕೆ ನೀಲಿ ಬಣ್ಣದ ಡಬ್ಬಿಗಳನ್ನು ವಿತರಿಸಲಾಗುವುದು. ಜೊತೆಗೆ ಎಲ್ಲಾ ಶೌಚಾಲಯಗಳಲ್ಲೂ ಸ್ಯಾನಿಟರಿ ಕಸ ಸಂಗ್ರಹಕ್ಕೆ ಕೆಂಪು ಬಣ್ಣದ ಡಬ್ಬಿ ಇಡಲಾಗುವುದು. ಆ ಬಳಿಕ ಎಲ್ಲ ಕಚೇರಿಗಳಲ್ಲೂ ಕಕಸವನ್ನು ಕಡ್ಡಾಯವಾಗಿ ವಿಂಗಡಿಸಿಯೇ ಕೊಡಬೇಕು ಎಂದರು.

ಕಸ ಸಂಗ್ರಹಿಸುವ ಪೌರಕಾರ್ಮಿಕರಿಗೆ ಹಸಿ, ಒಣ ಕಸವನ್ನು ಯಾವ ರೀತಿ ಸಂಗ್ರಹಿಸಬೇಕು ಎಂಬುದರ ಬಗ್ಗೆ ಘನತ್ಯಾಜ್ಯ ವಿಭಾಗದ ಅಧಿಕಾರಿಗಳು ಈಗಾಗಲೇ ತರಬೇತಿ ನೀಡಿದ್ದಾರೆ. ಎಲ್ಲಾ ಕಚೇರಿ ಸಿಬ್ಬಂದಿಗಳಿಗೂ ಕಸ ವಿಂಗಡಿಸಿ ಕೊಡುವಂತೆ ಸೂಚನೆ ನೀಡಿದ್ದಾರೆ. ಪಾಲಿಕೆ ಕಚೇರಿ, ಆವರಣದಲ್ಲಿ ಉತ್ಪತ್ತಿ ಆಗುವ ಹಸಿ ಕಸವನ್ನು ಆವರಣದಲ್ಲೇ ಸಂಸ್ಕರಿಸಿ ಗೊಬ್ಬರ ತಯಾರಿಸಿ ಎಲ್ಲರಿಗೂ ಮಾದರಿಯಾದ ಬಳಿಕ ಎಲ್ಲಾ ಸರ್ಕಾರಿ ಕಚೇರಿಗಳನ್ನು ಜೀರೋ ವೇಸ್ಟ್ ಕ್ಯಾಂಪಸ್ ಅನ್ನಾಗಿ ಮಾಡುವಂತೆ ಪಾಲಿಕೆಯಿಂದ ಸೂಚನೆ ನೀಡಲಾಗುವುದು ಎಂದು ಹೇಳಿದರು.

ಪಾಲಿಕೆ ಆಯುಕ್ತರು ಮಾತನಾಡಿ, ಪಾಲಿಕೆ ಆವರಣದಲ್ಲಿ "ಜೀರೋ ವೇಸ್ಟ್ ಕ್ಯಾಂಪಸ್" ಅಳವಡಿಸಿ ಎಲ್ಲರಿಗೂ ಮಾದರಿಯಾಗಿ, ಆ ಬಳಿಕ ಎಲ್ಲಾ ಕಚೇರಿಗಳಲ್ಲೂ ಜೀರೋ ವೇಸ್ಟ್ ಕ್ಯಾಂಪಸ್ ಅಳವಡಿಸಲು ಸೂಚನೆ ನೀಡಲಾಗುವು. ಕಚೇರಿಗಳಲ್ಲಿ ಮಾತ್ರವಲ್ಲದೆ ಮನೆಗಳಲ್ಲೂ ಕಸ ಸಂಸ್ಕರಣೆ ಮಾಡಿದರೆ ನಗರದಲ್ಲಿ ಕಸದ ಸಮಸ್ಯೆ ನಿವಾರಣೆಯಾಗಲು ಸಾದ್ಯ ಎಂದು ತಿಳಿಸಿದರು.

ಹಸಿ, ಒಣ, ಸ್ಯಾನಿಟರಿ ಕಸವನ್ನು ವಿಂಗಡಣೆ ಮಾಡಲು ಎಲ್ಲಾ ಕಚೇರಿಗಳಿಗೆ ಡಬ್ಬಿಗಳನ್ನು ವಿತರಿಸಲಾಗುತ್ತಿದೆ. ಈ ಬಗ್ಗೆ ಕಚೇರಿಗಳಿಗೆ ಕರಪತ್ರ ನೀಡಿ ಅರಿವು ಮೂಡಿಸುತ್ತಿದ್ದು, ಕಚೇರಿ ಮುಖ್ಯಸ್ಥರಿಗೆ ಸಮರ್ಪಕವಾಗಿ ಕಸ ವಿಂಗಡಣೆ ಮಾಡಿಕೊಡುವಂತೆ ಸೂಚನೆ ನೀಡಲಾಗಿದೆ. ಕಸ ವಿಂಗಡಿಸಿ ಕೊಡದಿದ್ದರೆ ಕಚೇರಿ ಮುಖ್ಯಸ್ಥರುಗಳನ್ನೇ ನೇರ ಹೊಣೆಗಾರರನ್ನಾಗಿಸಿ, ಅವರ ಮೇಲೆ ಸೂಕ್ತ ಕ್ರಮ ವಹಸಿಲಾಗುವುದು ಎಂದು ತಿಳಿಸಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**